# All India Radio: Bangalore
# Regional Bulletin In Kannada
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ
## 10.11.2025 / 6.40 p.m.

ಮುಖ್ಯಾಂಶಗಳು

1. ಪರಪ್ಪನ ಅಗ್ರಹಾರ ಜೈಲಿನಲ್ಲಿ ಕೈದಿಗಳಿಗೆ ರಾಜಾತಿಥ್ಯ: ಎನ್‌ಐಎ ಅಧಿಕಾರಿಗಳಿಂದ ಪರಿಶೀಲನೆ
2. ಮಾನವ–ಹುಲಿ ಸಂಘರ್ಷ: ಕರ್ತವ್ಯ ಲೋಪ ಎಸಗಿದರೆ ಕಠಿಣ ಕ್ರಮ– ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ
3. ರಾಜ್ಯದಲ್ಲಿ ವನ್ಯಜೀವಿಗಳ ಸಂಖ್ಯೆ ಹೆಚ್ಚಳ; ಜನವಸತಿ ಸ್ಥಳಾಂತರಿಸುವ ಕುರಿತಂತೆ ಪರಿಶೀಲನೆ: ಸಚಿವ ಈಶ್ವರ್.ಬಿ ಖಂಡ್ರೆ
4. ನಾಳೆ ಕೋಲಾರದ ಮಾಲೂರು ವಿಧಾನಸಭಾ ಕ್ಷೇತ್ರದ ಮರುಮತ ಎಣಿಕೆ; ಬಿಗಿ ಭದ್ರತೆ
5. ಕಬ್ಬಿಗೆ ನಿಗದಿಪಡಿಸಿದ ದರ ಕಾರ್ಖಾನೆ ಮಾಲೀಕರು ನೀಡಬೇಕು: ಸಂಸದ ಬಸವರಾಜ ಬೊಮ್ಮಾಯಿ ಆಗ್ರಹ

****************

ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಕೈದಿಗಳ ಮೊಬೈಲ್ ಬಳಕೆ, ವಿಶೇಷ ಆತಿಥ್ಯ ಪ್ರಕರಣದಲ್ಲಿ ಇಬ್ಬರು ಅಧಿಕಾರಿಗಳನ್ನು ಅಮಾನತು ಮಾಡಲಾಗಿದೆ. ಮುಖ್ಯ ಅಧೀಕ್ಷಕ ಕೆ.ಸುರೇಶ್ ಅವರನ್ನು ವರ್ಗಾವಣೆಗೊಳಿಸಿ ಆದೇಶ ಹೊರಡಿಸಲಾಗಿದೆ.

ಈ ನಡುವೆ ಎನ್‌ಐಎ ಅಧಿಕಾರಿಗಳ ಪ್ರಕರಣಕ್ಕೆ ಸಂಬಂಧಿಸಿದಂತೆ ಪರಿಶೀಲನೆ ನಡೆಸಿದ್ದಾರೆ. ಸಿಸಿಬಿ ಕಚೇರಿಗೆ ಆಗಮಿಸಿದ ಎನ್‌ಐಎ ಅಧಿಕಾರಿಗಳು, ಜೈಲಿನಲ್ಲಿ ಭಯೋತ್ಪಾದಕ ಬಳಸುತ್ತಿದ್ದ ಮೊಬೈಲ್ ಬಗ್ಗೆ ಮಾಹಿತಿ ಪಡೆದುಕೊಂಡಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರೊಂದಿಗೆ ಮಾತನಾಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಎನ್‌ಐಎ ಅಧಿಕಾರಿಗಳು, ಪರಿಶೀಲನೆ ನಡೆಸುತ್ತಿದ್ದು, ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಲಾಗಿದೆ ಎಂದು ತಿಳಿಸಿದ್ದಾರೆ. ಪ್ರಕರಣದ ತನಿಖೆಗೆ ಉನ್ನತಮಟ್ಟದ ಸಮಿತಿ ರಚಿಸಿರುವುದಾಗಿ ಘೋಷಿಸಿದ್ದಾರೆ.

ಕಾನೂನು ವ್ಯವಸ್ಥೆ ವಿಭಾಗದ ಎಡಿಜಿಪಿ ಆರ್.ಹಿತೇಂದ್ರ, ಸಂದೀಪ್ ಪಾಟೀಲ್, ಅಮರನಾಥ ರೆಡ್ಡಿ, ರಿಷ್ಯಂತ್ ಅವರನ್ನು ಒಳಗೊಂಡ ನಾಲ್ವರು ಅಧಿಕಾರಿಗಳ ಸಮಿತಿ ರಚಿಸಲಾಗಿದೆ. ತನಿಖೆ ಬಳಿಕ ವರದಿ ನೀಡುವಂತೆ ಸೂಚಿಸಲಾಗಿದೆ ಎಂದು ಹೇಳಿದ್ದಾರೆ.

****************

ಮಾನವ–ಹುಲಿ ಸಂಘರ್ಷಕ್ಕೆ ಕಾರಣ ಮತ್ತು ಪರಿಹಾರ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸಲಹೆ ನೀಡಿದ್ದಾರೆ.

ಮೈಸೂರಿನಲ್ಲಿ ನಡೆದ ಕೆಡಿಪಿ ಸಭೆಯಲ್ಲಿ ಮಾತನಾಡಿದ ಅವರು, ಕಾಡಿನಲ್ಲಿರುವ ನೀರಿನ ಗುಂಡಿಗಳನ್ನು ತುಂಬಿಸಬೇಕು. ಲಾಂಟೆನಾ ತೆಗಿಸಬೇಕು, ಅರಣ್ಯದಲ್ಲಿ ಮೇವು ಬೆಳೆಸಬೇಕು, ಆನೆ, ಹುಲಿಗಳು ಕಾಡಿನಿಂದ ಹೊರಬರುವ ಬಗ್ಗೆ ನಿರಂತರ ನಿಗಾ ವಹಿಸಬೇಕು ಎಂದು ಸೂಚಿಸಿದ್ದಾರೆ.

ಎಚ್.ಡಿ.ಕೋಟೆಯಲ್ಲಿ ಎ.ಸಿ.ಎಫ್ ಮತ್ತು ಆರ್.ಎಫ್.ಓ ಗಳ ನಡುವೆ ಹೊಂದಾಣಿಕೆ ಇಲ್ಲದಿರುವುದರಿಂದ ಸಮಸ್ಯೆಗಳು ಹೆಚ್ಚಾಗಿವೆ ಎಂದು ಶಾಸಕ ಅನಿಲ್ ಚಿಕ್ಕಮಾಧು ಮುಖ್ಯಮಂತ್ರಿಗಳ ಗಮನಕ್ಕೆ ತಂದರು. ಈ ವೇಳೆ, ಕರ್ತವ್ಯ ಲೋಪದಿಂದ ಜೀವಹಾನಿ ಸಂಭವಿಸಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಎಚ್ಚರಿಸಿದ್ದಾರೆ.

ರಾಜ್ಯದಲ್ಲಿ ಮೈಸೂರು ಸಿಲ್ಕ್ ಸೀರೆಗಳಿಗೆ ಬೇಡಿಕೆ ಹೆಚ್ಚಿದ್ದು, ಮಹಿಳೆಯರು ಐದಾರು ಗಂಟೆ ಸರತಿ ಸಾಲಿನಲ್ಲೂ ನಿಂತರೂ ಸೀರೆ ಸಿಗುತ್ತಿಲ್ಲ ಎಂದು ಗ್ಯಾರಂಟಿ ಪ್ರಾಧಿಕಾರದ ಉಪಾಧ್ಯಕ್ಷೆ ಪುಷ್ಪ ಅಮರನಾಥ್ ಮುಖ್ಯಮಂತ್ರಿಗಳ ಗಮನ ಸೆಳೆದರು. ಈ ವೇಳೆ, ಮೈಸೂರು ಸಿಲ್ಕ್ ಸೀರೆ ಉತ್ಪಾದನೆ ಹೆಚ್ಚಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಇದೇ ವೇಳೆ, ಮೈಸೂರು ಭಾಗದಲ್ಲಿ ಎರಡು ಬೆಳೆ ಮಾತ್ರ ಬೆಳೆಯಲು ಸಾಧ್ಯವಾಗುತ್ತಿದ್ದು, ಮಹಾರಾಷ್ಟ್ರಕ್ಕೆ ತೆರಳಿ ಮೂರು ಬೆಳೆ ಬೆಳೆಯುವ ಬಗ್ಗೆ ಅಧ್ಯಯನ ನಡೆಸಿ, ವರದಿ ನೀಡುವಂತೆ ಕೃಷಿ ಇಲಾಖೆ ಜಂಟಿ ನಿರ್ದೇಶಕರಿಗೆ ನಿರ್ದೇಶನ ನೀಡಿದ್ದಾರೆ.

****************

ರಾಜ್ಯದಲ್ಲಿ ವನ್ಯಜೀವಿಗಳ ಸಂಖ್ಯೆಯಲ್ಲಿ ಹೆಚ್ಚಳವಾಗಿದ್ದು, ಕಾಡಿನೊಳಗಿರುವ ಜನವಸತಿಗಳನ್ನು ಸ್ಥಳಾಂತರಿಸುವ ಕುರಿತಂತೆ ಪರಿಶೀಲಿಸಲಾಗುತ್ತಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಕುದುರೆಮುಖ ರಾಷ್ಟ್ರೀಯ ಉದ್ಯಾನವನದ ಕಾರ್ಕಳ ವ್ಯಾಪ್ತಿಯ ನಿವಾಸಿಗಳ ಪುರ್ನವಸತಿ ಮತ್ತು ಪರಿಹಾರಕ್ಕೆ ಸಂಬಂಧಿಸಿದಂತೆ 2005ರ ಸರ್ಕಾರಿ ಸುತ್ತೋಲೆ ಪುನರ್ ಪರಿಶೀಲಿಸಿ ಮರು ಆದೇಶ ಮಾಡುವಂತೆ ಕೋರಿ ಶಾಸಕ ಟಿ.ಡಿ. ರಾಜೇಗೌಡ ನೇತೃತ್ವದ ನಿಯೋಗದ ಮನವಿ ಸ್ವೀಕರಿಸಿ ಅವರು ಮಾತನಾಡಿದರು.

ಉತ್ತಮ ಪರಿಸರವಿರುವುದರಿಂದ ವನ್ಯಜೀವಿಗಳ ಸಂಖ್ಯೆಯಲ್ಲಿ ಹೆಚ್ಚಳವಾಗಿದೆ. ಆದರೆ ಹೆಚ್ಚುತ್ತಿರುವ ವನ್ಯಜೀವಿಗಳ ಸಂಖ್ಯೆಗೆ ಅನುಗುಣವಾಗಿ ವನ ಪ್ರದೇಶ ಹೆಚ್ಚದೆ ಇರುವುದರಿಂದ ಸಮಸ್ಯೆ ಉಲ್ಬಣಿಸುತ್ತಿದೆ ಎಂದು ಹೇಳಿದ್ದಾರೆ.

ಸ್ಥಳಾಂತರಕ್ಕೆ ಪರಿಹಾರ ನೀಡಬೇಕಾಗಿರುವುದರಿಂದ ಹಂತ ಹಂತವಾಗಿ ಸ್ಥಳಾಂತರಿಸಬೇಕಾಗುತ್ತದೆ. ಈ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಚರ್ಚಿಸಲಾಗುವುದು ಎಂದು ತಿಳಿಸಿದ್ದಾರೆ.

****************

ಸುಪ್ರೀಂ ಕೋರ್ಟ್‌ನ ಆದೇಶದ ಮೇರೆಗೆ ನಾಳೆ **ಕೋಲಾರದ ಮಾಲೂರು** ವಿಧಾನಸಭಾ ಕ್ಷೇತ್ರದ ಮರು ಮತ ಎಣಿಕೆ ನಡೆಯಲಿದೆ. ಮತ ಎಣಿಕೆ ಸಮಗ್ರತೆ ಮತ್ತು ಪಾರದರ್ಶಕತೆಯಿಂದ ಕೂಡಿರಬೇಕು ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಅವರಿಗೆ ಬಿಜೆಪಿ ನಿಯೋಗ ಮನವಿ ಸಲ್ಲಿಸಿದೆ.

ಮರು ಮತ ಎಣಿಕೆಯಲ್ಲಿ ಮತದಾರರ ನೋಂದಣಿ, ದಾಖಲಾದ ಮತಗಳು, ಎಣಿಕೆಯ ಫಲಿತಾಂಶ, ಎಣಿಕೆ ಮಾಡಲಾದ ವಿವಿ ಪ್ಯಾಟ್ ಸ್ಲಿಪ್‌ಗಳು, ಇವಿಎಂ ನಿಯಂತ್ರಣದ ಘಟಕದ ಒಟ್ಟು ಮೊತ್ತ ಹೊಂದಾಣಿಕೆಯಾಗಬೇಕು.

ಮರು ಮತ ಎಣಿಕೆ ಪ್ರಕ್ರಿಯೆಯು ಸಮಗ್ರತೆ ಮತ್ತು ಪಾರದರ್ಶಕತೆಯಿಂದ ಕೂಡಿರಬೇಕು. ಸಂಪೂರ್ಣ ಮರು ಎಣಿಕೆಯನ್ನು ವಿಡಿಯೋಗ್ರಫಿ ಮಾಡಬೇಕು ಎಂದು ಮನವಿ ಪತ್ರದಲ್ಲಿ ತಿಳಿಸಲಾಗಿದೆ.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ನಿಷ್ಪಕ್ಷಪಾತ ಮತ್ತು ನ್ಯಾಯಯುತವಾಗಿ ಎಲ್ಲವನ್ನೂ ಎಣಿಕೆ ಮಾಡಲು ಜಿಲ್ಲಾಧಿಕಾರಿ ಒಪ್ಪಿರುವುದಾಗಿ ತಿಳಿಸಿದ್ದಾರೆ.

****************

ದೇಶಾದ್ಯಂತ ನಡೆದಿದೆ ಎನ್ನಲಾದ ಮತ ಅಕ್ರಮದ ವಿರುದ್ಧ ರಾಜ್ಯದಲ್ಲಿ ಕಾಂಗ್ರೆಸ್ ಸಹಿ ಸಂಗ್ರಹ ಅಭಿಯಾನವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ. ಅಭಿಯಾನದಲ್ಲಿ ಸಂಗ್ರಹಿಸಿದ 1 ಕೋಟಿ 12 ಲಕ್ಷದ 41 ಸಾವಿರ ಸಹಿ ಸಂಗ್ರಹ ದಾಖಲೆಗಳ ಒಂದು ಪೆಟ್ಟಿಗೆಯನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ರಾಜ್ಯ ಕಾಂಗ್ರೆಸ್ ಮುಖಂಡರ ನಿಯೋಗ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಇಂದು ಸಾಂಕೇತಿಕವಾಗಿ ನೀಡಿತು. ಉಳಿದ ಪೆಟ್ಟಿಗೆಗಳನ್ನು ಎಐಸಿಸಿ ಕಾರ್ಯದರ್ಶಿ ನೆಟ್ಟ ಡಿಸೋಜ ಅವರಿಗೆ ಹಸ್ತಾಂತರಿಸಲಾಯಿತು. ರಾಜ್ಯದಲ್ಲಿ 40 ಜಿಲ್ಲೆಗಳಲ್ಲಿ ಸಹಿ ಸಂಗ್ರಹಿಸಲಾಗಿದೆ.

****************

ಕಬ್ಬಿಗೆ ನಿಗದಿ ಪಡಿಸಿದ ದರವನ್ನು ರೈತರಿಗೆ ನೀಡಲು ಸರಕಾರದ ಆಜ್ಞೆ ಪಾಲನೆ ಆಗುವಂತೆ ನೋಡಿಕೊಳ್ಳುವುದು ಸರಕಾರದ ಕರ್ತವ್ಯ ಎಂದು ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ. ಹಾವೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾರ್ಖಾನೆ ಮಾಲೀಕರು ಮುಖ್ಯಮಂತ್ರಿ ನಡೆಸಿದ ಸಭೆಯಲ್ಲಿ ಭಾಗವಹಿಸಿದ್ದರೂ, ಸರ್ಕಾರ ಸೂಚಿಸಿದ ಬೆಲೆ ನೀಡಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸ್ಪಷ್ಟನೆ ನೀಡುವಂತೆ ಒತ್ತಾಯಿಸಿದ್ದಾರೆ.

****************

ರಾಜಕೀಯ ಹಾಗೂ ಸಾರ್ವಜನಿಕ ವಲಯದಲ್ಲಿ ತೀವ್ರ ಕುತೂಹಲ ಕೆರಳಿಸಿದ್ದ **ಬೆಳಗಾವಿ** ಜಿಲ್ಲಾ ಸಹಕಾರಿ ಬ್ಯಾಂಕ್‌ನ ಅಧ್ಯಕ್ಷರಾಗಿ ಮಾಜಿ ಸಂಸದ ಅಣ್ಣಾಸಾಹೇಬ್ ಜೊಲ್ಲೆ, ಉಪಾಧ್ಯಕ್ಷರಾಗಿ ಶಾಸಕ ರಾಜು ಕಾಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಈ ಕುರಿತು ಮಾಹಿತಿ ನೀಡಿದ ಶಾಸಕ ಬಾಲಚಂದ್ರ ಜಾರಕಿಹೊಳಿ, ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಹಾಗೂ ಬ್ಯಾಂಕಿನ ಇತರೆ ಸದಸ್ಯರ ಜೊತೆಗೆ ಚರ್ಚಿಸಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಮುಂಬರುವ ದಿನಗಳಲ್ಲಿ ಬ್ಯಾಂಕಿನ ಆರ್ಥಿಕ ಅಭಿವೃದ್ಧಿಗೆ ವಿಶೇಷ ಒತ್ತು ನೀಡಲಾಗುವುದು ಎಂದು ತಿಳಿಸಿದ್ದಾರೆ.

****************

ಅಡಕೆ ಉತ್ಪನ್ನಗಳ ಪರಿಣಾಮಗಳ ಕುರಿತು ಹೆಚ್ಚಿನ ಸಂಶೋಧನೆಗಳ ಅಗತ್ಯತೆಯ ಬಗ್ಗೆ ಕೇಂದ್ರ ಸರ್ಕಾರದ ಗಮನ ಸೆಳೆಯಲಾಗಿದೆ ಎಂದು ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದ್ದಾರೆ. ದಾವಣಗೆರೆಯ ದಾಗಿನಕಟ್ಟೆ ಗ್ರಾಮದಲ್ಲಿಂದು ಕೃಷಿ ಪತ್ತಿನ ಸಹಕಾರ ಸಂಘದ ನೂತನ ಕಟ್ಟಡ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ದಾವಣಗೆರೆ ಭಾಗದಲ್ಲಿ ಸಂಶೋಧನಾ ಕೇಂದ್ರ ಸ್ಥಾಪಿಸಿ ಅಡಿಕೆಯ ಬಗ್ಗೆ ಹೆಚ್ಚಿನ ಸಂಶೋಧನೆಗಳು ನಡೆಸಬೇಕೆಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಮನವಿ ಸಲ್ಲಿಸಲಾಗಿದೆ ಎಂದು ಹೇಳಿದ್ದಾರೆ.

****************

ಪುಣೆಯಲ್ಲಿ ನಡೆದ ರಣಜಿ ಟ್ರೋಫಿ ಕ್ರಿಕೆಟ್ ಟೂರ್ನಿಯಲ್ಲಿ ಮಹಾರಾಷ್ಟ್ರದ ವಿರುದ್ಧ ಕರ್ನಾಟಕ ಮೊದಲ ಇನ್ನಿಂಗ್ಸ್‌ನಲ್ಲಿ 13 ರನ್‌ಗಳ ಅಲ್ಪ ಮುನ್ನಡೆ ಸಾಧಿಸಿದೆ. ಎರಡನೇ ಇನ್ನಿಂಗ್ಸ್‌ನಲ್ಲಿ ನಾಯಕ ಮಯಾಂಕ್ ಅಗರ್‌ವಾಲ್ ತಂಡಕ್ಕೆ ಆಸರೆಯಾಗಿದ್ದಾರೆ. ಕರ್ನಾಟಕ ಮೊದಲ ಇನ್ನಿಂಗ್ಸ್‌ನಲ್ಲಿ 313 ರನ್ ಹಾಗೂ ಎರಡನೇ ಇನ್ನಿಂಗ್ಸ್‌ನಲ್ಲಿ 5 ವಿಕೆಟ್ ನಷ್ಟಕ್ಕೆ 144 ರನ್ ಗಳಿಸಿ 13 ರನ್‌ಗಳ ಮುನ್ನಡೆ ಸಾಧಿಸಿದೆ.

****************

ಕಾರ್ಮಿಕ ಇಲಾಖೆ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಬೆಂಗಳೂರು ಸಾರಿಗೆ ಇಲಾಖೆ ಸಹಯೋಗದಲ್ಲಿ "ಮಂಡ್ಯ ಜಿಲ್ಲೆಯ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ಅರಿವು ಕಾರ್ಯಕ್ರಮ ನಾಳೆ ನಡೆಯಲಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಸವಿತಾ ತಿಳಿಸಿದ್ದಾರೆ.

********ಮುಕ್ತಾಯ*******